ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಶರಾವತಿ ಸಂತ್ರಸ್ತರಿಗೆ ಪರಿಹಾರಕ್ಕೆ ಕ್ರಮ

ಶಿವಮೊಗ್ಗ: ಹಲವು ವರ್ಷಗಳಿಂದ ನ್ಯಾಯಕ್ಕಾಗಿ ಕಾಯುತ್ತಿರುವ ಶರಾವತಿ ಮುಳುಗಡೆ ಸಂತ್ರಸ್ತರಿಗೆ ನ್ಯಾಯಯುತ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಿಎಂ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.



ಭಾನುವಾರ ಶಿವಮೊಗ್ಗ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಶರಾವತಿ ಮುಳುಗಡೆ ಸಂತ್ರಸ್ತರಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಹಾಗೂ ಭೂಮಿ ಹಕ್ಕು ನೀಡುವ ಸಂಬಂಧ ಈಗಾಗಲೇ ಬೆಂಗಳೂರಿನಲ್ಲಿ ಅಧಿಕಾರಿಗಳ ಸಭೆ ನಡೆಸಲಾಗಿದೆ. ಬಹಳ ವರ್ಷ ಗಳಿಂದ ನೆನಗುದಿಗೆ ಬಿದ್ದಿರುವ ಶರಾವತಿ ಸಂತ್ರಸ್ತರ ಸಮಸ್ಯೆ ಆದಷ್ಟು ಬೇಗನೇ ಪರಿಹರಿಸುವ ನಿಟ್ಟಿನಲ್ಲಿ ಶಾಸಕರೊಂದಿಗೆ ಸಹ ಸಭೆ ನಡೆಸಲಾಗಿದ್ದು, ಆದಷ್ಟು ಬೇಗನೆ ಸಮಸ್ಯೆಗೆ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

## ಉಪಚುನಾವಣೆಯಲ್ಲಿ ಗೆಲುವು ನಮ್ಮದೆ

ಶಿರಾ ಹಾಗೂ ಆರ್.ಆರ್. ನಗರ ಕ್ಷೇತ್ರದ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳು ದೊಡ್ಡ ಅಂತರದ ಗೆಲುವು ಸಾಧಿಸಲಿದ್ದಾರೆ. ಎರಡೂ ಕ್ಷೇತ್ರದಲ್ಲಿ ನಾವು ಗೆಲ್ಲಲಿದ್ದೇವೆ ಎಂದು ಚುನಾವಣೆ ಸಂದರ್ಭದಲ್ಲೇ ಹೇಳಿದ್ದೆ. ಆದರೆ, ಕಾಂಗ್ರೆಸ್‌ನವರು ಬಿಜೆಪಿ ವಿರುದ್ಧ ವೃಥಾ ಟೀಕೆ ಮಾಡಿದರು. ಶಿರಾದಲ್ಲಿ 25 ಸಾವಿರ ಹಾಗೂ ಆರ್.ಆರ್. ನಗರದಲ್ಲಿ 40 ಸಾವಿರ ಮತಗಳ ಅಂತರದ ಗೆಲುವು ಬಿಜೆಪಿಗೆ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶಿರಾ ಕ್ಷೇತ್ರದಲ್ಲಿ ನಾವು ಠೇವಣಿಯನ್ನೂ ಉಳಿಸಿಕೊಳ್ಳುವ ವಾತಾವರಣವಿರಲಿಲ್ಲ. ಈಗ ಅಲ್ಲಿ ಕಮಲ ಅರಳಲಿದೆ ಎಂದರು. ಬಿಹಾರದ ಮತದಾನೋತ್ತರ ಸಮೀಕ್ಷೆಗೆ ಪ್ರತಿಕ್ರಿಯಿಸಿದ ಸಿಎಂ, ಅಲ್ಲಿ ಮತ್ತೆ ನಿತೀಶ್ ಕುಮಾರ್ ಸರ್ಕಾರ ಅಧಿಕಾರಕ್ಕೆ ಬರುವ ವಿಶ್ವಾಸವಿದೆ, ನೋಡೋಣ ಎಂದು ಹೇಳಿದರು.